ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/35/ಎಲ್‌ಆರ್‌ಡಿಸಿ/2014-15

ನಿರ್ದೇಶಕರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001
ದಿನಾಂಕ: 03.05.2016

## ಜ್ಞಾಪನ

ವಿಷಯ: ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರೋಗ್ರಾಂಗಳನ್ನು ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಮಾನ್ಯತೆ ಪಡೆಯುವ ಸಲುವಾಗಿ ರಚಿಸಲಾಗಿರುವ ಸಮಿತಿಗೆ ಸದಸ್ಯರನ್ನು ಸೇರ್ಪಡೆಗೊಳಿಸುವ ಬಗ್ಗೆ.

*****

ರಾಜ್ಯದಲ್ಲಿನ ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ಗುಣಮಟ್ಟದ ಶಿಕ್ಷಣವನ್ನು ವಿದ್ಯಾರ್ಥಿಗಳಿಗೆ ನೀಡಿ ಕುಶಲತೆಯುಳ್ಳ ಕಾರ್ಯಪಡೆಯನ್ನು ತಯಾರಿಸಬೇಕೆಂದು ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ನಿಟ್ಟಿನಲ್ಲಿ ಕ್ರಮ ಜರುಗಿಸುವಂತೆ ಸೂಚಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರೋಗ್ರಾಂಗಳಿಗೆ ಮಾನ್ಯತೆ ನೀಡುವ ನಿಟ್ಟಿನಲ್ಲಿ ಸಲಹೆ ಸೂಚನೆಗಳನ್ನು ನೀಡಿ ಮಾರ್ಗದರ್ಶನ ಮಾಡುವ ಒಂದು ಸಲಹಾ ಸಮಿತಿಯನ್ನು ದಿನಾಂಕ: 15.10.2015 ರಲ್ಲಿ ರಚಿಸಲಾಗಿದ್ದು, ಸದರಿ ಸಮಿತಿಗೆ ಈ ಕೆಳಕಂಡವರನ್ನು ಸದಸ್ಯರನ್ನಾಗಿ ನೇಮಿಸಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

**ಶ್ರೀಯುತರಾದ:**

1. ಡಾ|| ಗುರುಪ್ರಸಾದ್ ಎಂ ಹೂಗಾರ,
   ಸಹಾಯಕ ಪ್ರಾಧ್ಯಾಪಕರು ಮತ್ತು
   ಸಂಯೋಜನಾಧಿಕಾರಿಗಳು (ಎನ್‌ಎಸ್‌ಎಸ್)
   ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು

2. ಪವಿತ್ರ ಪಿ.ಎಸ್
   ಸಹಾಯಕ ಪ್ರಾಧ್ಯಾಪಕರು ಮತ್ತು
   ಯೋಜನಾಧಿಕಾರಿಗಳು, ಎಸ್‌ಪಿಎಫ್‌ಯು, ಕರ್ನಾಟಕ,
   ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು

ಮೇಲ್ಕಂಡ ಸದಸ್ಯರು, ಸಮಿತಿಯ ಇನ್ನಿತರ ಸದಸ್ಯರುಗಳೊಂದಿಗೆ ಸಂಯೋಜಿಸಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರೋಗ್ರಾಂಗಳಿಗೆ ಮಾನ್ಯತೆ ಪಡೆಯಲು ಅನುಕೂಲವಾಗುವಂತೆ ಹಾಗೂ ಮಾನ್ಯತೆ ಸಂಬಂಧಿ ತಯಾರಿ ನಡೆಸಲು ಸೂಕ್ತ ಕ್ರಮ ಜರುಗಿಸುವಂತೆ ಸೂಚಿಸಲಾಗಿದೆ. ಕ್ರಮ ಜರುಗಿಸಿದ ಬಗ್ಗೆ ನಿರ್ದೇಶನಾಲಯಕ್ಕೆ ವರದಿಯನ್ನು ಸಲ್ಲಿಸಲು ಸಹ ಸೂಚಿಸಲಾಗಿದೆ.

ನಿರ್ದೇಶಕರು.

ಇವರಿಗೆ.

1. ಸದರಿ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳ ಸೂಕ್ತ ಕ್ರಮಕ್ಕಾಗಿ
3. ಜಂಟಿ ನಿರ್ದೇಶಕರು, ಸಿಡಿಸಿ ಇವರ ಸೂಕ್ತ ಮಾಹಿತಿ ಹಾಗೂ ಕ್ರಮಕ್ಕಾಗಿ
4. ನಿರ್ದೇಶನಾಲಯದ ಮಾನ್ಯತಾ ಕೋಶದ ಮಾಹಿತಿಗಾಗಿ
5. ಇ-ಆಡಳಿತದ ಸೂಕ್ತ ಕ್ರಮಕ್ಕಾಗಿ
6. ನಿರ್ದೇಶಕರ ಆಪ್ತ ಶಾಖೆಗೆ ಮಾಹಿತಿಗಾಗಿ.